# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 660(707)
**ಸದಸ್ಯರ ಹೆಸರು** : ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
**ಉತ್ತರಿಸಬೇಕಾದ ದಿನಾಂಕ** : 20-12-2021
**ಉತ್ತರಿಸುವ ಸಚಿವರು** : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ (ಸಿವಿಲ್) ಸಂಖ್ಯೆ: 483/2004 ದಿನಾಂಕ: 12.04.2009ರಂದು ನೀಡಿರುವ ತೀರ್ಪಿನಲ್ಲಿ "All Existing Government And Private Schools Functioning in our County" ಎಂದು ತೀರ್ಪು ನೀಡಿರುವಾಗ ಸರ್ಕಾರವು ಈ ಆದೇಶದಿಂದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಹೊರಗಿಡಲು ಕಾರಣವೇನು ? | ತಮಿಳುನಾಡಿನ ಕೃಷ್ಣ ಮಾಧ್ಯಮಿಕ ಶಾಲೆಯಲ್ಲಿ ಅಗ್ನಿ ದುರಂತದ ಹಿನ್ನಲೆಯಲ್ಲಿ, ದಾಖಲಾದ ಸಾರ್ವಜನಿಕ ಹಿತಾಸಕ್ತಿಯ ಅರ್ಜಿಯ ವಿಚಾರಣೆಯ ಹಂತದಲ್ಲಿ ಸರ್ವೋಚ್ಚ ನ್ಯಾಯಾಲಯವು ಶಾಲೆಗಳ ಸುರಕ್ಷತಾ ನಿಯಮವನ್ನು ಅಳವಡಿಸಲು ಪಾಲಿಸಿಯನ್ನು ರೂಪಿಸುವಂತೆ ಆದೇಶಿಸಿದ ಹಿನ್ನಲೆಯಲ್ಲಿ ಕೇಂದ್ರ ಸರ್ಕಾರವು 2016ರಲ್ಲಿ ಎನ್ .ಡಿ.ಎಂ.ಎ ಕಾಯ್ದೆ ಅಡಿಯಲ್ಲಿ ಶಾಲಾ ಸುರಕ್ಷತಾ ಪಾಲಿಸಿ ನಿಯಮವನ್ನು ಜಾರಿಗೆ ತಂದಿದ್ದು, ಸದರಿ ನಿಯಮದಂತೆ ಎಲ್ಲಾ ರಾಜ್ಯಗಳು ಶಾಲೆಗಳಲ್ಲಿ ಸುರಕ್ಷತಾ ನಿಯಮವನ್ನು ಪಾಲಿಸುವುದಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿರುವ ಹಿನ್ನಲೆಯಲ್ಲಿ ಅಗ್ನಿ ಮತ್ತು ಕಟ್ಟಡ ಸುರಕ್ಷತೆ ನಿಯಮವನ್ನು ಜಾರಿಗೊಳಿಸಲಾಗಿದೆ. ಈ ನಿಯಮವು ಎಲ್ಲಾ ಶಾಲೆಗಳಿಗೂ ಅನ್ವಯವಾಗುತ್ತದೆ. ಸರ್ಕಾರಿ ಶಾಲೆಗಳಿಗೆ ಮಾನ್ಯತೆ, ನವೀಕರಣ ಇಲ್ಲದೇ. ಇರುವುದರಿಂದ ಇಲಾಖೆಯು ಪ್ರತ್ಯೇಕವಾಗಿ ಮಾರ್ಗಸೂಚಿಯನ್ನು ಹೊರಡಿಸುತ್ತದೆ. ಈಗಾಗಲೇ, ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಪ್ರತಿ ಮೂರು ತಿಂಗಳಿಗೊಮ್ಮೆ ಸರ್ಕಾರಿ ಶಾಲೆಗಳಲ್ಲಿ ತೆಗೆದುಕೊಂಡ ಸುರಕ್ಷತಾ ಕ್ರಮಗಳ ಬಗ್ಗೆ ತ್ರೈಮಾಸಿಕ ವರದಿಯನ್ನು ನೀಡಲಾಗುತ್ತಿದೆ. |

**ಇಪಿ 412 ಪಿಜಿಸಿ 2021**

**[ಬಿ.ಸಿ. ನಾಗೇಶ್]**
**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.**